All India Radio: Bangalore
National Bulletin In Kannada
30.08.2026  7.35 am
ಆಕಾಶವಾಣಿ, ಬೆಂಗಳೂರು
ರಾಷ್ಟ್ರೀಯ ವಾರ್ತೆಗಳು
30.08.2026  7.35 am

<>><><*><><<>

ಮುಖ್ಯಾಂಶಗಳು

- ತಾಷ್ಕೆಂಟ್‌ನಲ್ಲಿಂದು ಉಜ್ಬೇಕಿಸ್ತಾನ್ ಅಧ್ಯಕ್ಷರೊಂದಿಗೆ ಪ್ರಧಾನಿ ನರೇಂದ್ರ ಮೋದಿ ದ್ವಿಪಕ್ಷೀಯ ಮಾತುಕತೆ
- ಮನ್ ಕಿ ಬಾತ್‌ನ ೧೩೭ನೇ ಆವೃತ್ತಿಯಲ್ಲಿಂದು ಸಮಸ್ತ ಭಾರತೀಯರನ್ನುದ್ದೇಶಿಸಿ ಪ್ರಧಾನಿ ಭಾಷಣ
- ನೇಪಾಳ ಪ್ರವಾಹ ದುರಂತ; ಮೃತರ ಸಂಖ್ಯೆ ೬೭೫ ಕ್ಕೆ ಏರಿಕೆ; ಈವರೆಗೆ ೧೦೮ ಭಾರತೀಯರ ರಕ್ಷಣೆ; ತೀವ್ರಗೊಂಡ ಶೋಧ ಕಾರ್ಯ
- ಲಕ್ನೋದಲ್ಲಿಂದು ಕೈಗಾರಿಕಾ ಸಮಾವೇಶದಲ್ಲಿ ರಕ್ಷಣಾ ಸಚಿವ ರಾಜನಾಥ್ ಸಿಂಗ್ ಭಾಗಿ; ಹಲವು ಅಭಿವೃದ್ಧಿ ಯೋಜನೆಗಳಿಗೆ ಚಾಲನೆ
- ಟಿ-೨೦ ಏಷ್ಯಾ ಕಪ್ ಕ್ರಿಕೆಟ್; ಇಂದು ಭಾರತ - ಥಾಯ್ಲೆಂಡ್ ಮುಖಾಮುಖಿ

<>><><*><><<>

ಪ್ರಧಾನಮಂತ್ರಿ ನರೇಂದ್ರ ಮೋದಿ ಅವರು ಇಂದು ಉಜ್ಬೇಕಿಸ್ತಾನ್ ಅಧ್ಯಕ್ಷ ಶಾವ್ಕತ್ ಮಿರ್ಜಿಯೊಯೆವ್ ಅವರೊಂದಿಗೆ ದ್ವಿಪಕ್ಷೀಯ ಮಾತುಕತೆ ನಡೆಸಲಿದ್ದಾರೆ.  ತಾಷ್ಕೆಂಟ್‌ನಲ್ಲಿ ನಡೆಯಲಿರುವ ಸಭೆಯಲ್ಲಿ ವ್ಯಾಪಾರ ಮತ್ತು ಹೂಡಿಕೆ, ರಕ್ಷಣೆ, ಡಿಜಿಟಲ್ ಸಂಪರ್ಕ, ಇಂಧನ, ಶಿಕ್ಷಣ ಹಾಗೂ ಜನರ ನಡುವಿನ ಸಂಪರ್ಕ ಸೇರಿದಂತೆ ವಿವಿಧ ಕ್ಷೇತ್ರಗಳ ಸಹಕಾರವನ್ನು ಉಭಯ ನಾಯಕರು ಪರಿಶೀಲಿಸಲಿದ್ದಾರೆ. ಇದಕ್ಕೂ ಮುನ್ನ ಪ್ರಧಾನಿ ನರೇಂದ್ರ ಮೋದಿ ಅವರು ಉಜ್ಬೇಕಿಸ್ತಾನ್ ಯೋಗ ಒಕ್ಕೂಟ ಆಯೋಜಿಸಿರುವ ಯೋಗ ಕಾರ್ಯಕ್ರಮದಲ್ಲಿ ಪಾಲ್ಗೊಳ್ಳಲಿದ್ದಾರೆ. ಬಳಿಕ ಅವರು ಅಧ್ಯಕ್ಷ ಶಾವ್ಕತ್ ಮಿರ್ಜಿಯೊಯೆವ್ ಅವರೊಂದಿಗೆ ದ್ವಿಪಕ್ಷೀಯ ಮಾತುಕತೆ ನಡೆಸಲಿದ್ದಾರೆ. ಉಭಯ ರಾಷ್ಟ್ರಗಳ ನಡುವಿನ ರಕ್ಷಣಾ ಕ್ಷೇತ್ರದ ಸಹಕಾರ ನಿರಂತರವಾಗಿ ವೃದ್ಧಿಯಾಗುತ್ತಿದೆ. ಇದರೊಂದಿಗೆ ಗಣಿಗಾರಿಕೆ, ವಿಶೇಷವಾಗಿ ಅಪರೂಪದ ಭೂ ಖನಿಜಗಳು, ಚಿನ್ನ ಸೇರಿದಂತೆ ವಿವಿಧ ಲೋಹಗಳು ಹಾಗೂ ಇತರ ಉಪಯುಕ್ತ ಖನಿಜಗಳ ಕ್ಷೇತ್ರದಲ್ಲಿನ ಸಹಕಾರದ ಕುರಿತು ಚರ್ಚೆ ನಡೆಯುವ ಸಾಧ್ಯತೆ ಇದೆ. ಔಷಧ, ಕೃಷಿ ಮತ್ತು ಕೌಶಲ್ಯಾಭಿವೃದ್ಧಿ ಕ್ಷೇತ್ರಗಳು ಹಾಗೂ ಹೊಸ ಸಂಪರ್ಕ ಮಾರ್ಗಗಳ ಅನ್ವೇಷಣೆಯೂ ಉಭಯ ನಾಯಕರ ಮಾತುಕತೆಯ ಪ್ರಮುಖ ವಿಷಯಗಳಾಗುವ ನಿರೀಕ್ಷೆಯಿದೆ. ಕಳೆದ ೧೦ ವರ್ಷಗಳಲ್ಲಿ ಉಭಯ ರಾಷ್ಟ್ರಗಳ ನಡುವಿನ ವ್ಯಾಪಾರ ಶೇಕಡಾ ೩೦೦ರಷ್ಟು ಹೆಚ್ಚಾಗಿದೆ. ಪ್ರಸ್ತುತ ೧ ಶತಕೋಟಿ ಡಾಲರ್‌ಗಳಿರುವ ದ್ವಿಪಕ್ಷೀಯ ವ್ಯಾಪಾರವನ್ನು ಮುಂಬರುವ ವರ್ಷಗಳಲ್ಲಿ ದ್ವಿಗುಣಗೊಳಿಸುವ ಗುರಿಯನ್ನು ಉಭಯ ರಾಷ್ಟ್ರಗಳು ಹೊಂದಿವೆ. ಈ ಸಂಬಂಧ ಇಂದು ಕೆಲವು ಮಹತ್ವದ ಒಪ್ಪಂದಗಳಿಗೆ ಸಹಿ ಹಾಕಲಾಗುವ ನಿರೀಕ್ಷೆಯಿದೆ.

<>><><*><><<>

ಪ್ರಧಾನಮಂತ್ರಿ ನರೇಂದ್ರ ಮೋದಿ ಅವರು ಇಂದು ಬೆಳಗ್ಗೆ ೧೧ ಗಂಟೆಗೆ ಆಕಾಶವಾಣಿಯ ಜನಪ್ರಿಯ ಕಾರ್ಯಕ್ರಮ ಮನ್ ಕಿ ಬಾತ್‌ನಲ್ಲಿ ದೇಶ ಹಾಗೂ ವಿದೇಶಗಳ ಭಾರತೀಯ ಸಮುದಾಯದೊಂದಿಗೆ ತಮ್ಮ ಮನದ ಮಾತನ್ನು ಹಂಚಿಕೊಳ್ಳಲಿದ್ದಾರೆ. ಇದು ಮನ್ ಕಿ ಬಾತ್ ರೇಡಿಯೊ ಕಾರ್ಯಕ್ರಮದ ೧೩೭ನೇ ಆವೃತ್ತಿಯಾಗಿದೆ. ಕಾರ್ಯಕ್ರಮ ಆಕಾಶವಾಣಿ ಮತ್ತು ದೂರದರ್ಶನದ ಎಲ್ಲಾ ವಾಹಿನಿಗಳಲ್ಲಿ ಮತ್ತು ಎಐಆರ್ ನ್ಯೂಸ್ ವೆಬ್‌ಸೈಟ್ ಹಾಗೂ ನ್ಯೂಸ್ ಆನ್ ಏರ್ ಮೊಬೈಲ್ ಆಪ್‌ನಲ್ಲಿ ಪ್ರಸಾರವಾಗಲಿದೆ. ಎಐಆರ್ ನ್ಯೂಸ್, ಡಿಡಿ ನ್ಯೂಸ್, ಪ್ರಧಾನಮಂತ್ರಿ ಕಾರ್ಯಾಲಯ ಹಾಗೂ ಮಾಹಿತಿ ಮತ್ತು ಪ್ರಸಾರ ಸಚಿವಾಲಯದ ಯೂಟ್ಯೂಬ್ ವಾಹಿನಿಗಳಲ್ಲೂ ಕಾರ್ಯಕ್ರಮ ನೇರಪ್ರಸಾರವಾಗಲಿದೆ. ಹಿಂದಿ ಅವತರಣಿಕೆಯ ನಂತರ ಪ್ರಾದೇಶಿಕ ಭಾಷೆಗಳಲ್ಲಿ ಕಾರ್ಯಕ್ರಮ ಬಿತ್ತರಗೊಳ್ಳಲಿದೆ.

<>><><*><><<>

ಗುಜರಾತ್‌ನಲ್ಲಿ ಇಂದು ಪ್ರಸಾರವಾಗಲಿರುವ ಪ್ರಧಾನಮಂತ್ರಿ ನರೇಂದ್ರ ಮೋದಿಯವರ ೧೩೭ನೇ ಆವೃತ್ತಿಯ 'ಮನ್ ಕಿ ಬಾತ್' ಕಾರ್ಯಕ್ರಮವನ್ನು ಆಲಿಸಲು ಭಾರತೀಯ ಜನತಾ ಪಕ್ಷವು ರಾಜ್ಯಾದ್ಯಂತ ವಿವಿಧ ಸಮುದಾಯಗಳನ್ನು ಒಳಗೊಂಡ ವಿಶೇಷ ಕಾರ್ಯಕ್ರಮಗಳನ್ನು ಆಯೋಜಿಸಿದೆ. ಪಕ್ಷದ ಹಿರಿಯ ಮುಖಂಡರು, ಯುವಜನರು, ರೈತರು, ವೃತ್ತಿಪರರು ಹಾಗೂ ವಿವಿಧ ಸಮುದಾಯಗಳ ಸದಸ್ಯರೊಂದಿಗೆ ಕಾರ್ಯಕ್ರಮವನ್ನು ಆಲಿಸಲಿದ್ದಾರೆ ಎಂದು ಪಕ್ಷದ ಮುಖಂಡರು ತಿಳಿಸಿದ್ದಾರೆ. ಕೇಂದ್ರ ಜಲಶಕ್ತಿ ಸಚಿವ ಸಿ.ಆರ್. ಪಾಟೀಲ್ ಅವರು ಸೂರತ್ ನಗರದ ಉದ್ನಾ ಪ್ರದೇಶದಲ್ಲಿರುವ ಬಿಜೆಪಿ ಕಚೇರಿಯಲ್ಲಿ ಚಾರ್ಟರ್ಡ್ ಅಕೌಂಟೆಂಟ್‌ಗಳು ಮತ್ತು ಕಂಪನಿ ಕಾರ್ಯದರ್ಶಿಗಳೊಂದಿಗೆ ಕಾರ್ಯಕ್ರಮವನ್ನು ಆಲಿಸಲಿದ್ದಾರೆ. ಮುಖ್ಯಮಂತ್ರಿ ಭೂಪೇಂದ್ರ ಪಟೇಲ್ ಅವರು ಅಹಮದಾಬಾದ್ ನಗರದ ಥಲ್ತೇಜ್ ಪ್ರದೇಶದ ಘಟ್ಲೋಡಿಯಾ ವಿಧಾನಸಭಾ ಕ್ಷೇತ್ರದ ೧೭೨ನೇ ಮತಗಟ್ಟೆಯಲ್ಲಿ ಕಾರ್ಯಕ್ರಮವನ್ನು ಆಲಿಸಲಿದ್ದಾರೆ. ಗುಜರಾತ್‌ನಾದ್ಯಂತ ಎಲ್ಲಾ ಮತಗಟ್ಟೆಗಳಲ್ಲಿ ಇದೇ ರೀತಿಯ ಕಾರ್ಯಕ್ರಮಗಳನ್ನು ಆಯೋಜಿಸಲಾಗಿದ್ದು, ಪಕ್ಷದ ಮುಖಂಡರು, ಚುನಾಯಿತ ಪ್ರತಿನಿಧಿಗಳು, ಕಾರ್ಯಕರ್ತರು ಹಾಗೂ ಸಾರ್ವಜನಿಕರು 'ಮನ್ ಕಿ ಬಾತ್' ಕಾರ್ಯಕ್ರಮವನ್ನು ಆಲಿಸಲಿದ್ದಾರೆ ಎಂದು ಪಕ್ಷದ ಮುಖಂಡರು ತಿಳಿಸಿದ್ದಾರೆ.

<>><><*><><<>

ನೇಪಾಳದಲ್ಲಿ ಸಂಭವಿಸಿದ ಭೀಕರ ದಿಢೀರ್ ಪ್ರವಾಹ ದುರಂತದಲ್ಲಿ ಮೃತಪಟ್ಟವರ ಸಂಖ್ಯೆ ೬೭೫ಕ್ಕೆ ಏರಿಕೆಯಾಗಿದ್ದು, ಪ್ರಕೃತಿ ವಿಕೋಪ ಪೀಡಿತ ಪ್ರದೇಶಗಳಲ್ಲಿ ರಕ್ಷಣಾ ಮತ್ತು ಶೋಧ ಕಾರ್ಯಾಚರಣೆಗಳು ತೀವ್ರಗತಿಯಲ್ಲಿ ಮುಂದುವರಿದಿವೆ. ಪ್ರದೇಶದಲ್ಲಿ ಮತ್ತೆ ಮಳೆಯಾಗುತ್ತಿರುವುದು ಹಾಗೂ ಮತ್ತಷ್ಟು ಪ್ರವಾಹ ಎದುರಾಗುವ ಭೀತಿ ಸೃಷ್ಟಿಯಾಗಿರುವುದು ರಕ್ಷಣಾ ಕಾರ್ಯಕ್ಕೆ ಸವಾಲಾಗಿ ಪರಿಣಮಿಸಿದೆ. ಪ್ರಸ್ತುತ ಕನಿಷ್ಠ ೩೨೦ ವಿದೇಶಿ ಪ್ರಜೆಗಳು ಸೇರಿದಂತೆ ಸುಮಾರು ೨ ಸಾವಿರದ ೪೦೦ ಜನರು ಇನ್ನು ಕೂಡ ಕಾಣೆಯಾಗಿದ್ದಾರೆ. ಪ್ರವಾಹ ಪರಿಸ್ಥಿತಿಯ ನಡುವೆಯೂ ಸಂಪರ್ಕ ಕಳೆದುಕೊಂಡಿದ್ದ ೨೮೧ ವಿದೇಶಿ ಪ್ರವಾಸಿಗರು ಸೇರಿದಂತೆ ಒಟ್ಟು ೪ ಸಾವಿರದ ೪೦೦ಕ್ಕೂ ಹೆಚ್ಚು ಜನರನ್ನು ರಕ್ಷಣಾ ಪಡೆಗಳು ಸುರಕ್ಷಿತ ಸ್ಥಳಗಳಿಗೆ ಸ್ಥಳಾಂತರಿಸಿವೆ.

ನೇಪಾಳ ಪೊಲೀಸರ ಅಧಿಕೃತ ವರದಿಯ ಪ್ರಕಾರ, ಒಟ್ಟು ಎಂಟು ಜಿಲ್ಲೆಗಳಿಂದ ಇದುವರೆಗೆ ೬೭೫ ಮೃತದೇಹಗಳನ್ನು ಹೊರತೆಗೆಯಲಾಗಿದೆ. ಇವುಗಳಲ್ಲಿ ಚಿತ್ವಾನ್, ಪೂರ್ವ ನವಲಪರಾಸಿ ಹಾಗೂ ಪಶ್ಚಿಮ ನವಲಪರಾಸಿ ಜಿಲ್ಲೆಗಳಲ್ಲಿ ಅತಿ ಹೆಚ್ಚು ಸಾವುನೋವುಗಳು ಸಂಭವಿಸಿವೆ. ದುರಂತ ಪೀಡಿತ ಪ್ರದೇಶಗಳಲ್ಲಿ ರಕ್ಷಣಾ ಕಾರ್ಯಕ್ಕಾಗಿ ೧೫ ಸಾವಿರಕ್ಕೂ ಹೆಚ್ಚು ಭದ್ರತಾ ಸಿಬ್ಬಂದಿಯನ್ನು ನಿಯೋಜಿಸಲಾಗಿದ್ದು, ನೆರವು ಅಗತ್ಯವಿರುವ ದುರ್ಗಮ ಪ್ರದೇಶಗಳಿಗೆ ಹೆಲಿಕಾಪ್ಟರ್‌ಗಳ ಮೂಲಕ ನಿರಂತರ ಕಾರ್ಯಾಚರಣೆ ನಡೆಸಿ ಜನರನ್ನು ತೆರವುಗೊಳಿಸಲಾಗುತ್ತಿದೆ ಹಾಗೂ ಅಗತ್ಯ ಪರಿಹಾರ ವಸ್ತುಗಳನ್ನು ತಲುಪಿಸಲಾಗುತ್ತಿದೆ. ನೇಪಾಳ ಪ್ರವಾಹ ದುರಂತದ ನಂತರ ಇದುವರೆಗೆ ೧೦೮ ಭಾರತೀಯ ಪ್ರಜೆಗಳನ್ನು ಯಶಸ್ವಿಯಾಗಿ ರಕ್ಷಿಸಲಾಗಿದೆ ಎಂದು ಕೇಂದ್ರ ವಿದೇಶಾಂಗ ವ್ಯವಹಾರಗಳ ಸಚಿವಾಲಯ ತಿಳಿಸಿದೆ.  ಈ ಕುರಿತು ಸಾಮಾಜಿಕ ಜಾಲತಾಣದಲ್ಲಿ ಮಾಹಿತಿ ಹಂಚಿಕೊಂಡಿರುವ ವಿದೇಶಾಂಗ ವ್ಯವಹಾರಗಳ ಸಚಿವಾಲಯದ ವಕ್ತಾರ ರಣಧೀರ್ ಜೈಸ್ವಾಲ್ ಅವರು, ಈ ಹಿಂದೆ ಸಂಪರ್ಕಕ್ಕೆ ಸಿಗದೆ ಇದ್ದ ಸುಮಾರು ೫೦ ಭಾರತೀಯ ಪ್ರಜೆಗಳೊಂದಿಗೆ ಮತ್ತೆ ಸಂಪರ್ಕವನ್ನು ಸಾಧಿಸಲಾಗಿದೆ ಎಂದು ಸ್ಪಷ್ಟಪಡಿಸಿದ್ದಾರೆ.  ಪ್ರಸ್ತುತ ವರದಿಗಳ ಪ್ರಕಾರ, ೨೭೫ ಭಾರತೀಯ ಪ್ರಜೆಗಳು ಕಾಣೆಯಾಗಿದ್ದಾರೆ ಹಾಗೂ ಇತರ ದೇಶಗಳ ಪೌರತ್ವ ಹೊಂದಿರುವ ಸುಮಾರು ೧೨೮ ಭಾರತೀಯ ಮೂಲದ ವ್ಯಕ್ತಿಗಳು ಕೂಡ ಪತ್ತೆಯಾಗಿಲ್ಲ. ಸ್ಥಳೀಯ ಸರ್ಕಾರಿ ಮೂಲಗಳ ಪ್ರಕಾರ, ಕಳೆದ ಎರಡು ದಿನಗಳಲ್ಲಿ ೫೯೮ ಭಾರತೀಯ ಪ್ರಜೆಗಳು ಚೀನಾದಿಂದ ನೇಪಾಳಕ್ಕೆ ಗಡಿ ದಾಟಿ ಬಂದಿದ್ದಾರೆ. ಇದೇ ವೇಳೆ, ಚೀನಾದಿಂದ ಇನ್ನು ಹೊರಡಬೇಕಿರುವ ೯೦೦ ಭಾರತೀಯ ಪ್ರಜೆಗಳು ಸುರಕ್ಷಿತವಾಗಿದ್ದು, ಬೀಜಿಂಗ್‌ನಲ್ಲಿರುವ ಭಾರತೀಯ ರಾಯಭಾರ ಕಚೇರಿಯು ಅವರೊಂದಿಗೆ ನೇರವಾಗಿ ಮತ್ತು ಸ್ಥಳೀಯ ಸರ್ಕಾರದ ಮೂಲಕ ನಿರಂತರ ಸಂಪರ್ಕದಲ್ಲಿದೆ. ಪ್ರಕೃತಿ ವಿಕೋಪಕ್ಕೆ ಸಿಲುಕಿರುವ ನೇಪಾಳದ ಶೋಧ ಮತ್ತು ರಕ್ಷಣಾ ಕಾರ್ಯಾಚರಣೆಗಳಿಗೆ ಸಂಪೂರ್ಣ ಬೆಂಬಲ ನೀಡಲು ಭಾರತ ಸರ್ಕಾರವು ರಾಷ್ಟ್ರೀಯ ವಿಪತ್ತು ನಿರ್ವಹಣಾ ಪಡೆ ಸೇವೆಯನ್ನು ಒದಗಿಸಿದೆ.  ಇದರ ಜೊತೆಗೆ ಭಾರತೀಯ ವಾಯುಪಡೆಯ ವಿಮಾನಗಳ ಮೂಲಕ ತುರ್ತು ಮಾನವೀಯ ನೆರವು ಮತ್ತು ಅಗತ್ಯ ಪರಿಹಾರ ಸಾಮಗ್ರಿಗಳನ್ನು ತಕ್ಷಣವೇ ನೇಪಾಳಕ್ಕೆ ರವಾನಿಸಲಾಗಿದೆ.  ನಿನ್ನೆ ೧೧ ಟನ್ ತೂಕದ ಪರಿಹಾರ ಸಾಮಗ್ರಿಗಳೊಂದಿಗೆ ನಾಲ್ಕನೇ ಸಿ-೧೩೦ಜೆ ಹರ್ಕ್ಯುಲಸ್ ಸಾರಿಗೆ ವಿಮಾನವನ್ನು ಕಠ್ಮಂಡುವಿಗೆ ಕಳುಹಿಸಿಕೊಡಲಾಗಿದೆ ಎಂದು ವಿದೇಶಾಂಗ ವ್ಯವಹಾರಗಳ ಸಚಿವ ಡಾ.ಎಸ್.ಜೈಶಂಕರ್ ತಿಳಿಸಿದ್ದಾರೆ. ಸಂಕಷ್ಟದಲ್ಲಿರುವ ಪ್ರಜೆಗಳ ಸುರಕ್ಷತೆ ಮತ್ತು ನೆರೆ ಸಂತ್ರಸ್ತರಿಗೆ ಅಗತ್ಯ ಸಹಾಯ ತಲುಪಿಸಲು ಕೇಂದ್ರ ಸರ್ಕಾರವು ಅಗತ್ಯ ಕ್ರಮಗಳನ್ನು ಕೈಗೊಳ್ಳುತ್ತಿದೆ.

<>><><*><><<>

ಮೂರು ದಿನಗಳ ಉತ್ತರಪ್ರದೇಶ ಪ್ರವಾಸದಲ್ಲಿರುವ ರಕ್ಷಣಾ ಸಚಿವ ರಾಜನಾಥ್ ಸಿಂಗ್ ಅವರಿಂದು ಲಖ್ನೋದಲ್ಲಿ ಇಂದು 'ಪ್ರಧಾನಮಂತ್ರಿ ಸೇತು ಯೋಜನೆಯಡಿ' ಆಯೋಜಿಸಲಾಗಿರುವ ಕೈಗಾರಿಕಾ ಸಮಾವೇಶವನ್ನು ಉದ್ದೇಶಿಸಿ ಭಾಷಣ ಮಾಡಲಿದ್ದಾರೆ.  ಈ ಸಮಾವೇಶದಲ್ಲಿ ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು ವೃತ್ತಿಪರ ಶಿಕ್ಷಣಕ್ಕೆ ಸಂಬಂಧಿಸಿದ ವಿವಿಧ ವಿಷಯಗಳ ಕುರಿತು ಸಮಗ್ರ ಚರ್ಚೆಗಳು ನಡೆಯಲಿವೆ. ಸಮಾವೇಶದಲ್ಲಿ ಪಾಲ್ಗೊಳ್ಳುವ ಮುನ್ನ ರಕ್ಷಣಾ ಸಚಿವರು ಪ್ರಧಾನಮಂತ್ರಿ ನರೇಂದ್ರ ಮೋದಿ ಅವರ 'ಮನ್ ಕಿ ಬಾತ್' ಕಾರ್ಯಕ್ರಮವನ್ನು ವೀಕ್ಷಿಸಲಿದ್ದಾರೆ.  ನಂತರ, ಮುಖ್ಯಮಂತ್ರಿ ಯೋಗಿ ಆದಿತ್ಯನಾಥ್ ಅವರ ಉಪಸ್ಥಿತಿಯಲ್ಲಿ ಲಕ್ನೋ ಕಂಟೋನ್ಮೆಂಟ್ ಪ್ರದೇಶದಲ್ಲಿ ಸುಮಾರು ೧೦೧ ಕೋಟಿ ರೂಪಾಯಿ ಮೌಲ್ಯದ ೧೨ ಪ್ರಮುಖ ಅಭಿವೃದ್ಧಿ ಯೋಜನೆಗಳಿಗೆ ಅವರು ಶಂಕುಸ್ಥಾಪನೆ ನೆರವೇರಿಸಲಿದ್ದಾರೆ.

ತಮ್ಮ ಪ್ರವಾಸದ ಎರಡನೇ ದಿನವಾದ ನಿನ್ನೆ ರಕ್ಷಣಾ ಸಚಿವರು, ಲಕ್ನೋದಲ್ಲಿ 'ಫ್ರಾಗ್ರನ್ಸ್ ಪಾರ್ಕ್' ಅನ್ನು ಉದ್ಘಾಟಿಸಿ ಮಾತನಾಡಿದರು. ಕಾರ್ಯಕ್ರಮದ ವೇಳೆ ಅವರು ಲಾಲಾ ಲಜಪತ್ ರಾಯ್ ಮತ್ತು ಶಹೀದ್ ಭಗತ್ ಸಿಂಗ್ ಅವರ ಪ್ರತಿಮೆಗಳನ್ನು ಅನಾವರಣಗೊಳಿಸುವುದರ ಜೊತೆಗೆ ೪ ಸಾವಿರದ ೩೧೩ ಲಕ್ಷ ರೂಪಾಯಿ ವೆಚ್ಚದ ವಿವಿಧ ಅಭಿವೃದ್ಧಿ ಕಾಮಗಾರಿಗಳಿಗೆ ಶಂಕುಸ್ಥಾಪನೆ ನೆರವೇರಿಸಿದರು.

<>><><*><><<>

ದುಬೈ ಅಂತಾರಾಷ್ಟ್ರೀಯ ಕ್ರಿಕೆಟ್ ಕ್ರೀಡಾಂಗಣದಲ್ಲಿ ಇಂದು ನಡೆಯಲಿರುವ ಟಿ-೨೦ ಮಹಿಳಾ ಏಷ್ಯಾ ಕಪ್ ಕ್ರಿಕೆಟ್ ಟೂರ್ನಿಯ ತನ್ನ ಮೊದಲ ಪಂದ್ಯದಲ್ಲಿ ಭಾರತದ ಮಹಿಳಾ ತಂಡ, ಥಾಯ್ಲೆಂಡ್ ವಿರುದ್ಧ ಅಭಿಯಾನ ಆರಂಭಿಸಲಿದೆ. ಪಂದ್ಯ ಭಾರತೀಯ ಕಾಲಮಾನ ರಾತ್ರಿ ೮.೩೦ಕ್ಕೆ ಆರಂಭವಾಗಲಿದೆ. ಹರ್ಮನ್‌ಪ್ರೀತ್ ಕೌರ್ ಭಾರತ ತಂಡವನ್ನು ಮುನ್ನಡೆಸಲಿದ್ದು, ಸ್ಮೃತಿ ಮಂಧಾನ ಉಪನಾಯಕಿಯಾಗಿದ್ದಾರೆ. ಗಾಯಗೊಂಡಿರುವ ಜೆಮಿಮಾ ರೋಡ್ರಿಗಸ್ ಬದಲಿಗೆ ಪ್ರತಿಕಾ ರಾವಲ್ ಅವರನ್ನು ತಂಡಕ್ಕೆ ಸೇರಿಸಿಕೊಳ್ಳಲಾಗಿದೆ.

<>><><*><><<>

ಸಂಸತ್ತು ಕಾನೂನು ರೂಪಿಸುವವರೆಗೆ ಕಾಯದೆ, 'ಡಿಜಿಟಲ್ ಬಂಧನ'ದಂತಹ ನೂತನ ಮಾದರಿಯ ಸೈಬರ್ ವಂಚನೆಗಳನ್ನು ಭಾರತೀಯ ನ್ಯಾಯಾಂಗವು ಸ್ವಯಂಪ್ರೇರಿತವಾಗಿ ಗಮನಕ್ಕೆ ತೆಗೆದುಕೊಂಡು ಸಕ್ರಿಯವಾಗಿ ಕಾರ್ಯನಿರ್ವಹಿಸುತ್ತಿದೆ ಎಂದು ಸುಪ್ರೀಂಕೋರ್ಟ್ ಮುಖ್ಯ ನ್ಯಾಯಮೂರ್ತಿ ಸೂರ್ಯ ಕಾಂತ್ ಹೇಳಿದ್ದಾರೆ. ಲಂಡನ್‌ನಲ್ಲಿ ನಡೆದ ೪೩ನೇ ಆರ್ಥಿಕ ಅಪರಾಧಗಳ ಕುರಿತ ಅಂತಾರಾಷ್ಟ್ರೀಯ ಸಮ್ಮೇಳನದ ಸಮಾರೋಪ ಭಾಷಣದಲ್ಲಿ ಮಾತನಾಡಿದ ಅವರು, ವಿಡಿಯೋ ಕರೆಗಳ ಮೂಲಕ ಪೊಲೀಸ್ ಅಥವಾ ನ್ಯಾಯಾಂಗ ಅಧಿಕಾರಿಗಳಂತೆ ನಟಿಸಿ ವಂಚಿಸುವ ಪ್ರಕರಣಗಳ ತೀವ್ರತೆಯನ್ನು ಪರಿಶೀಲಿಸಲು ಸುಪ್ರೀಂ ಕೋರ್ಟ್ ಕೇಂದ್ರ ಮತ್ತು ರಾಜ್ಯ ಸರ್ಕಾರಗಳಿಗೆ ನಿರ್ದೇಶನ ನೀಡಿದೆ ಎಂದು ತಿಳಿಸಿದ್ದಾರೆ. ಜೊತೆಗೆ, ಇಂತಹ ಅಪರಾಧಗಳಿಗೆ ಪ್ರತ್ಯೇಕ ಶಿಕ್ಷಾ ನಿಯಮಗಳನ್ನು ರೂಪಿಸುವ ಅಗತ್ಯವನ್ನು ಉನ್ನತ ನ್ಯಾಯಾಲಯ ಪ್ರತಿಪಾದಿಸಿದೆ ಎಂದಿದ್ದಾರೆ.

<>><>< ಇಲ್ಲಿಗೆ ವಾರ್ತಾ ಪ್ರಸಾರ ಮುಕ್ತಾಯವಾಯಿತು ><><<>

<>><>< ನಮ್ಮ ಮುಂದಿನ ವಾರ್ತಾ ಪ್ರಸಾರ ಮಧ್ಯಾಹ್ನ ೧೨ ಕ್ಕೆ ><><<>